Akashvani: Bangalore

National Bulletin in Kannada

13.12.2025 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

13.12.2025 : 7.35AM

******

**ಮುಖ್ಯಾಂಶಗಳು :**

೧. ಕೋಲ್‌ಸೇತು ನೀತಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ; ಸಂಪನ್ಮೂಲಗಳ ನ್ಯಾಯಯುತ ಬಳಕೆಗೆ ಒತ್ತು

೨. ೨೦೨೬ರ ಹಂಗಾಮಿಗೆ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಅನುಮೋದನೆ

೩. ಸ್ವದೇಶಿ ಚಿಂತನೆಯು ಸ್ವಾವಲಂಬಿ ಭಾರತದ ಮೂಲತತ್ವ - ಲೋಕಸಭಾಧ್ಯಕ್ಷ ಓಂ ಬಿರ್ಲಾ

೪. ನವದೆಹಲಿಯಲ್ಲಿ ರಾಷ್ಟ್ರೀಯ ಕರಕುಶಲ ಮತ್ತು ಪರಂಪರೆ ಸಪ್ತಾಹ-೨೦೨೫ರ ಭಾಗವಾಗಿ ಕ್ರಾಫ್ಟ್‌ಕಥಾಗೆ ಚಾಲನೆ

೫. ಸ್ಕ್ವಾಷ್ ವಿಶ್ವಕಪ್; ಸೆಮಿಫೈನಲ್‌ನಲ್ಲಿಂದು ಭಾರತ - ಈಜಿಪ್ಟ್ ಮುಖಾಮುಖಿ

**********

ಕೇಂದ್ರ ಸರ್ಕಾರವು 'ಕೋಲ್‌ಸೇತು' ನೀತಿಯನ್ನು ಅನುಮೋದಿಸಿದೆ. ಇದು ವಿವಿಧ ಕೈಗಾರಿಕಾ ಬಳಕೆಗಳು ಮತ್ತು ರಫ್ತಿಗೆ ಕಲ್ಲಿದ್ದಲು ಸಂಪರ್ಕಗಳ ಹರಾಜಿಗೆ ಹೊಸ ವ್ಯವಸ್ಥೆ ಸೃಷ್ಟಿಸುತ್ತದೆ, ಹಾಗೂ ಸಂಪನ್ಮೂಲಗಳ ನ್ಯಾಯಯುತ ಪ್ರವೇಶ ಮತ್ತು ಅತ್ಯುತ್ತಮ ಬಳಕೆಯನ್ನು ಖಚಿತಪಡಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿಯು ನಿನ್ನೆ

ತಡೆರಹಿತ, ದಕ್ಷ ಮತ್ತು ಪಾರದರ್ಶಕ ಬಳಕೆಗಾಗಿ ಕಲ್ಲಿದ್ದಲು ಸಂಪರ್ಕದ ಹರಾಜು ನೀತಿಗೆ ಅನುಮೋದನೆ ನೀಡಿತು. ನವದೆಹಲಿಯಲ್ಲಿ ನಿನ್ನೆ ಸಂಜೆ ಸಂಪುಟದ ನಿರ್ಧಾರಗಳ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ೨೦೧೬ರ ಎನ್‌ಆರ್‌ಎಸ್ ನಿಯಂತ್ರಿತವಲ್ಲದ ವಲಯದ ಸಂಪರ್ಕ ಹರಾಜು ನೀತಿಯಲ್ಲಿ 'ಕೋಲ್‌ಸೇತು' ಎಂಬ ಪ್ರತ್ಯೇಕ ವ್ಯವಸ್ಥೆಯನ್ನು ಸೇರಿಸುವ ಮೂಲಕ ಯಾವುದೇ ಕೈಗಾರಿಕಾ ಬಳಕೆ ಮತ್ತು ರಫ್ತಿಗೆ ದೀರ್ಘಾವಧಿಯವರೆಗೆ ಹರಾಜು ಆಧಾರದ ಮೇಲೆ ಕಲ್ಲಿದ್ದಲು ಸಂಪರ್ಕಗಳ ಹಂಚಿಕೆಗೆ ಈ ನೀತಿಯು ಅವಕಾಶ ನೀಡುತ್ತದೆ ಎಂದು ಹೇಳಿದರು. ಕಲ್ಲಿದ್ದಲು ಅಗತ್ಯವಿರುವ ಯಾವುದೇ ದೇಶೀಯ ಖರೀದಿದಾರರು ಅಂತಿಮ ಬಳಕೆಯನ್ನು ಲೆಕ್ಕಿಸದೆ ಸಂಪರ್ಕ ಹರಾಜಿನಲ್ಲಿ ಭಾಗವಹಿಸಬಹುದು ಎಂದು ಅವರು ಹೇಳಿದರು.

***ಧ್ವನಿ *** ಅಶ್ವಿನಿ ವೈಷ್ಣವ್

೨೦೨೭ರ ಜನಗಣತಿಯನ್ನು ನಡೆಸಲು ಸಂಪುಟವು ೧೧ ಸಾವಿರದ ೭೧೮ ಕೋಟಿ ರೂಪಾಯಿಗಳ ಬಜೆಟ್‌ಅನ್ನು ಅಂಗೀಕರಿಸಿದೆ. ಈ ಕುರಿತು ಮಾಹಿತಿ ನೀಡಿದ ಸಚಿವರು, ೨೦೨೭ರ ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗುವುದು ಎಂದು ಹೇಳಿದರು. ಇದು ಮೊದಲ ಡಿಜಿಟಲ್ ಜನಗಣತಿಯಾಗಲಿದೆ. ೨೦೨೭ ರ ಜನಗಣತಿಯು ಒಟ್ಟಾರೆ ೧೬ನೇ ಮತ್ತು ಸ್ವಾತಂತ್ರ್ಯದ ನಂತರದ ೮ ನೇ ಜನಗಣತಿಯಾಗಲಿದೆ. ಭಾರತದ ಜನಗಣತಿಯನ್ನು ವಿಶ್ವದ ಅತಿದೊಡ್ಡ ಆಡಳಿತಾತ್ಮಕ ಮತ್ತು ಸಂಖ್ಯಾಶಾಸ್ತ್ರೀಯ ಕ್ರಮವೆಂದು ಪರಿಗಣಿಸಲಾಗಿದೆ ಎಂದು ಅವರು ತಿಳಿಸಿದರು. ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ೨೦೨೬ರ ಹಂಗಾಮಿಗೆ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆಗೆ ಅನುಮೋದನೆ ನೀಡಿದೆ. ಬೆಳೆಗಾರರಿಗೆ ಲಾಭದಾಯಕ ಬೆಲೆಗಳನ್ನು ಒದಗಿಸುವ ಸಲುವಾಗಿ, ಸರ್ಕಾರವು ೨೦೧೮-೧೯ ರ ಕೇಂದ್ರ ಬಜೆಟ್‌ನಲ್ಲಿ ಎಲ್ಲಾ ಕಡ್ಡಾಯ ಬೆಳೆಗಳ ಎಂಎಸ್‌ಪಿ ಅನ್ನು ಅಖಿಲ ಭಾರತ ಸರಾಸರಿ ಉತ್ಪಾದನಾ ವೆಚ್ಚದ ಕನಿಷ್ಠ ೧.೫ ಪಟ್ಟು ಮಟ್ಟದಲ್ಲಿ

ನಿಗದಿಪಡಿಸಲಾಗುವುದು ಎಂದು ಘೋಷಿಸಿತ್ತು. ಮಿಲ್ಲಿಂಗ್ ಕೊಬ್ಬರಿಗೆ ಎಂಎಸ್‌ಪಿಯನ್ನು ಕ್ವಿಂಟಲ್‌ಗೆ ೪೪೫ ರೂಪಾಯಿಗಳಿಂದ ೧೨ ಸಾವಿರದ ೨೭ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ ಮತ್ತು ಅದೇ ಅವಧಿಗೆ ಉಂಡೆ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆ ೨೦೨೬ರ ಹಂಗಾಮಿಗೆ ಕ್ವಿಂಟಲ್‌ಗೆ ೪೦೦ ರೂಪಾಯಿಗಳಿಂದ ೧೨ ಸಾವಿರದ ೫೦೦ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಹೆಚ್ಚಿನ ಕನಿಷ್ಠ ಬೆಂಬಲ ಬೆಲೆಯು ತೆಂಗಿನ ಬೆಳೆಗಾರರಿಗೆ ಉತ್ತಮ ಲಾಭದಾಯಕ ಆದಾಯವನ್ನು ಖಚಿತಪಡಿಸುವುದಲ್ಲದೆ, ದೇಶೀಯವಾಗಿ ಮತ್ತು ಅಂತಾರಾಷ್ಟ್ರೀಯವಾಗಿ ತೆಂಗಿನ ಉತ್ಪನ್ನಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ಕೊಬ್ಬರಿ ಉತ್ಪಾದನೆಯನ್ನು ವಿಸ್ತರಿಸಲು ರೈತರನ್ನು ಪ್ರೋತ್ಸಾಹಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

**********

ಭಾರತದ ಇಂಧನ ಭದ್ರತೆಯನ್ನು ಬಲಪಡಿಸುವ ಮತ್ತು ಬೆಳವಣಿಗೆಯನ್ನು ವೇಗಗೊಳಿಸುವ ನಿಟ್ಟಿನಲ್ಲಿ ಕೋಲ್‌ಸೇತು ನೀತಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿರುವುದು ಒಂದು ಪ್ರಮುಖ ಹೆಜ್ಜೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಕೋಲ್‌ಸೇತು ನೀತಿಯು ಕಲ್ಲಿದ್ದಲಿನ ಸುಗಮ, ಪರಿಣಾಮಕಾರಿ ಮತ್ತು ಪಾರದರ್ಶಕ ಬಳಕೆಯನ್ನು ಸಕ್ರಿಯಗೊಳಿಸಲು ಒಂದು ಹೊಸ ವ್ಯವಸ್ಥೆಯನ್ನು ಸೃಷ್ಟಿಸುತ್ತದೆ ಎಂದಿದ್ದಾರೆ. ೨೦೨೬ ರ ಹಂಗಾಮಿಗೆ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸುವ ಸಂಪುಟದ ನಿರ್ಧಾರವು ತೆಂಗಿನಕಾಯಿ ಕೃಷಿಕರ ಆದಾಯವನ್ನು ಹೆಚ್ಚಿಸುವುದಲ್ಲದೆ, ಕೊಬ್ಬರಿ ಉತ್ಪಾದನೆಗೆ ಪ್ರೋತ್ಸಾಹವನ್ನು ನೀಡುತ್ತದೆ. ದೇಶಾದ್ಯಂತ ರೈತರ ಜೀವನವನ್ನು ಉತ್ತಮಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

**********

ಸ್ವದೇಶಿ ಚಿಂತನೆಯು ಸ್ವಾವಲಂಬಿ ಭಾರತದ ಮೂಲತತ್ವವಾಗಿದ್ದು, ಪ್ರತಿಯೊಬ್ಬ ನಾಗರಿಕನೂ ಅದನ್ನು ತಮ್ಮ ದೈನಂದಿನ ಜೀವನದ ಭಾಗವಾಗಿ ಅಳವಡಿಸಿಕೊಳ್ಳಬೇಕು ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಅಂತಾರಾಷ್ಟ್ರೀಯ ಜನ್-ಮಂಗಲ್ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಉಪವಾಸ, ಯೋಗ, ಧ್ಯಾನ ಮತ್ತು ಸ್ವದೇಶಿ ತತ್ವಗಳು ಜೀವನಕ್ಕೆ ಸಂಯಮ, ಸಮತೋಲನ ಮತ್ತು ಆಂತರಿಕ ಶಕ್ತಿಯನ್ನು ತರುವ ಪ್ರಬಲ ಅಭ್ಯಾಸಗಳಾಗಿವೆ ಎಂದರು. ಈ ಕಾರ್ಯಕ್ರಮವನ್ನು ಅಂತರ್ಮಾನ ಧಾರ್ಮಿಕ ಟ್ರಸ್ಟ್ ಮತ್ತು ಪತಂಜಲಿ ಯೋಗಪೀಠ ಜಂಟಿಯಾಗಿ ಆಯೋಜಿಸಿದ್ದು, ಆಧ್ಯಾತ್ಮಿಕ ನಾಯಕರು, ವಿದ್ವಾಂಸರು ಮತ್ತು ಯೋಗಾಭ್ಯಾಸಿಗಳನ್ನು ಒಟ್ಟುಗೂಡಿಸಿದೆ.

**********

ರಾಜ್ಯಸಭಾ ಸಂಸದೆ ಸುಧಾ ಮೂರ್ತಿ ಅವರು ನಿನ್ನೆ ನವದೆಹಲಿಯಲ್ಲಿ ರಾಷ್ಟ್ರೀಯ ಕರಕುಶಲ ಮತ್ತು ಪರಂಪರೆ ಸಪ್ತಾಹ-೨೦೨೫ರ ಆಚರಣೆಯ ಭಾಗವಾಗಿ ಭಾರತದಾದ್ಯಂತದ ಕರಕುಶಲ ವಸ್ತುಗಳನ್ನು ಪ್ರದರ್ಶಿಸುವ "ಕ್ರಾಫ್ಟ್‌ಕಥಾ - ೨೦೨೫" ಪ್ರದರ್ಶನವನ್ನು ಉದ್ಘಾಟಿಸಿದರು. ಈ ಪ್ರದರ್ಶನವು ಸುಸ್ಥಿರ ಜೀವನೋಪಾಯವನ್ನು ಉತ್ತೇಜಿಸುವ, ಯುವ ಕುಶಲಕರ್ಮಿಗಳನ್ನು ಪ್ರೋತ್ಸಾಹಿಸುವ ಮತ್ತು ತಳಮಟ್ಟದ ಕರಕುಶಲ ಪರಿಸರ ವ್ಯವಸ್ಥೆಗಳನ್ನು ಬಲಪಡಿಸುವ ಮೂಲಕ ದೇಶದ ಕಲಾತ್ಮಕ ಪರಂಪರೆಯನ್ನು ಆಚರಿಸುವ ಗುರಿಯನ್ನು ಹೊಂದಿದೆ ಎಂದು ಜವಳಿ ಸಚಿವಾಲಯ ತಿಳಿಸಿದೆ. ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ಅಖಿಲ ಭಾರತ ಕುಶಲಕರ್ಮಿಗಳು ಮತ್ತು ಕರಕುಶಲ ಕಾರ್ಮಿಕರ ಕಲ್ಯಾಣ ಸಂಘದ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ತಿಂಗಳ ೧೭ ರವರೆಗೆ ಪ್ರತಿದಿನ ಬೆಳಿಗ್ಗೆ ೧೧ ರಿಂದ ರಾತ್ರಿ ೮ ರವರೆಗೆ ಸೃಜನಶೀಲತೆ ಮತ್ತು ಕರಕುಶಲತೆಯನ್ನು ಅನುಭವಿಸಲು ಕರಕುಶಲ ಪ್ರಿಯರು, ಖರೀದಿದಾರರು,

ವಿನ್ಯಾಸಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಪ್ರದರ್ಶನ ಮುಕ್ತವಾಗಿದೆ ಎಂದು ಸಚಿವಾಲಯ ತಿಳಿಸಿದೆ.

**********

೨೦೦೧ರ ಇದೇ ದಿನ ನವದೆಹಲಿಯ ಸಂಸತ್ ಭವನದ ಮೇಲೆ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಭದ್ರತಾ ಸಿಬ್ಬಂದಿ ಮತ್ತು ಸಂತ್ರಸ್ತರನ್ನು ದೇಶ ಇಂದು ಸ್ಮರಿಸುತ್ತಿದೆ. ದಾಳಿಯಲ್ಲಿ ಮೃತಪಟ್ಟವರಿಗೆ ಸಂಸತ್ ಭವನದ ಆವರಣದಲ್ಲಿಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರು ಮತ್ತು ಸಂಸತ್ ಸದಸ್ಯರು ಪುಷ್ಪನಮನ ಸಲ್ಲಿಸಲಿದ್ದಾರೆ.

**********

ಸಾಂಪ್ರದಾಯಿಕ ಮತ್ತು ಉದಯೋನ್ಮುಖ ಸವಾಲುಗಳನ್ನು ಎದುರಿಸಲು ರಕ್ಷಣಾ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸುವುದು ಅಗತ್ಯ ಎಂದು ರಕ್ಷಣಾ ಇಲಾಖೆಯ ರಕ್ಷಣಾ ಉತ್ಪಾದನಾ ವಿಭಾಗದ ಕಾರ್ಯದರ್ಶಿ ಸಂಜೀವ್ ಕುಮಾರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಭಾರತೀಯ ಕಂಟ್ರೋಲರ್ ಮತ್ತು ಆಡಿಟರ್ ಜನರಲ್ ಆಯೋಜಿಸಿದ್ದ ಆತ್ಮ ನಿರ್ಭರ ಭಾರತದಡಿಯಲ್ಲಿ ರಕ್ಷಣಾ ಮತ್ತು ಇತರ ಸರ್ಕಾರಿ ಉಪಕ್ರಮಗಳು ಎಂಬ ವಿಷಯದ ಕುರಿತು ಮಾತನಾಡಿದ ಅವರು, ಶ್ರೀಜನ್ ಯೋಜನೆಯ ಪ್ರಭಾವ, ಐಡೆಕ್ಸ್ ಯೋಜನೆ ಸೇರಿದಂತೆ ದೇಶದಲ್ಲಿ ಸದೃಢ ರಕ್ಷಣಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಪೂರಕ ಉಪಕ್ರಮಗಳ ಕುರಿತು ಮಾಹಿತಿ ನೀಡಿದರು.

**********

ಚೆನ್ನೈನಲ್ಲಿಂದು ನಡೆಯಲಿರುವ ಸ್ಕ್ವ್ಯಾಷ್ ವಿಶ್ವಕಪ್‌ನ ಸೆಮಿಫೈನಲ್‌ನಲ್ಲಿ ಎರಡನೇ ಶ್ರೇಯಾಂಕದ ಭಾರತ ತಂಡವು ಹಾಲಿ ಚಾಂಪಿಯನ್ ಈಜಿಪ್ಟ್ ತಂಡವನ್ನು

ಎದುರಿಸಲಿದೆ. ಇನ್ನೊಂದು ಸೆಮಿಫೈನಲ್‌ನಲ್ಲಿ ಅಗ್ರ ಶ್ರೇಯಾಂಕದ ಹಾಂಕಾಂಗ್ ತಂಡವು ಜಪಾನ್ ತಂಡವನ್ನು ಎದುರಿಸಲಿದೆ. ಏಳನೇ ಶ್ರೇಯಾಂಕದ ದಕ್ಷಿಣ ಆಫ್ರಿಕಾ ವಿರುದ್ಧ ೩-೦ ಅಂತರದ ಭರ್ಜರಿ ಜಯ ಸಾಧಿಸುವ ಮೂಲಕ ಭಾರತ ಅಂತಿಮ ನಾಲ್ಕರ ಘಟ್ಟಕ್ಕೆ ಲಗ್ಗೆಯಿಟ್ಟರೆ, ನಿನ್ನೆ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಈಜಿಪ್ಟ್ ಆಸ್ಟ್ರೇಲಿಯಾವನ್ನು ೩-೦ ಅಂತರದಿಂದ ಸೋಲಿಸಿತು. ಸತತ ಎರಡನೇ ಬಾರಿ ಸ್ಕ್ವಾಷ್ ವಿಶ್ವಕಪ್‌ನಲ್ಲಿ ಭಾರತ ಸೆಮಿಫೈನಲ್‌ಗೆ ಅರ್ಹತೆ ಪಡೆದಿದೆ. ಟೂರ್ನಿಯ ಆರಂಭದಲ್ಲಿ, ಭಾರತ, ಸ್ವಿಟ್ಜರ್ಲೆಂಡ್ ಮತ್ತು ಬ್ರೆಜಿಲ್ ತಂಡಗಳನ್ನು ಸೋಲಿಸಿ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದಿತ್ತು.

****END****